ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ, ಮೆಟ್ರಿಕ್ ನಂತರದ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ /ವಸತಿ ಕಾಲೇಜುಗಳ ಮತ್ತು ಆಶ್ರಮ ಶಾಲೆಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ಸಕಇ 118 ಸಮನ್ವಯ 2011, ದಿನಾಂಕ:09-05-2011

(2) 2013-14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ

-----

ಪ್ರಸ್ತಾವನೆ:

ಮೇಲೆ ಓದಲಾದ (1)ರ ಆದೇಶದಲ್ಲಿ, ಆಶ್ರಮ ಶಾಲೆಗಳ ಭೋಜನಾ ವೆಚ್ಚವನ್ನು ರೂ.500/- ರಿಂದ ರೂ.600/- ಗಳಿಗೆ, ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಭೋಜನಾ ವೆಚ್ಚವನ್ನು ರೂ. 650/- ರಿಂದ ರೂ.750/- ಗಳಿಗೆ, ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಭೋಜನಾ ವೆಚ್ಚವನ್ನು ರೂ. 750/- ರಿಂದ ರೂ.800/-ಕ್ಕೆ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಭೋಜನಾ ವೆಚ್ಚವನ್ನು ರೂ.750/- ರಿಂದ ರೂ.850/-ಕ್ಕೆ ಹೆಚ್ಚಿಸಲಾಗಿತ್ತು.

ರಾಜ್ಯದ ಸರ್ಕಾರಿ, ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಭೋಜನ ವೆಚ್ಚವನ್ನು ಮಾಹೆಯಾನ ರೂ.850/- ರಿಂದ ರೂ.1,000/-ಕ್ಕೆ, ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು ಮಾಹೆಯಾನ ರೂ.750/- ರಿಂದ ರೂ.900/-ಕ್ಕೆ, ವಸತಿ ಶಾಲೆ /ವಸತಿ ಕಾಲೇಜುಗಳ ವಿದ್ಯಾರ್ಥಿಗಳ ಭೋಜನ ವೆಚ್ಚವನ್ನು ಮಾಹೆಯಾನ ರೂ.850/- ರಿಂದ ರೂ.1,000/-ಕ್ಕೆ ಮತ್ತು ಆಶ್ರಮ ಶಾಲೆಗಳ ಮಕ್ಕಳಿಗೆ ಭೋಜನ ವೆಚ್ಚವನ್ನು ಮಾಹೆಯಾನ ರೂ.600/-ರಿಂದ ರೂ.700/-ಕ್ಕೆ ಹೆಚ್ಚಿಸಲು, 2013-14ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ, ಸದರಿ ಘೋಷಣೆಯನ್ನು ಅನುಷ್ಠಾನಗೊಳಿಸಲು, ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ.

**ಆದೇಶ ಸಂಖ್ಯೆ ಬಿಸಿಡಬ್ಲ್ಯೂ 356 ಬಿಎಂಎಸ್ 2013(ಭಾಗ),**
**ಬೆಂಗಳೂರು, ದಿನಾಂಕ:24.09.2013**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ, ಮೆಟ್ರಿಕ್ ನಂತರದ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ /ವಸತಿ ಕಾಲೇಜುಗಳ ಮತ್ತು ಆಶ್ರಮ ಶಾಲೆಗಳ ವಿದ್ಯಾರ್ಥಿಗಳಿಗೆ, ಮಾಸಿಕ ಭೋಜನಾ ವೆಚ್ಚವನ್ನು ದಿನಾಂಕ: 01-08-2013 ರಿಂದ ಜಾರಿಗೆ ಬರುವಂತೆ ಹಾಗೂ ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ವಿವರ | ಪ್ರಸ್ತುತ ಮಾಸಿಕ ಭೋಜನಾ ವೆಚ್ಚ | ಪರಿಷ್ಕೃತ ಮಾಸಿಕ ಭೋಜನಾ ವೆಚ್ಚ |
|---|---|---|---|
| 1 | ಸರ್ಕಾರಿ, ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ /ವಸತಿ ಕಾಲೇಜುಗಳ ವಿದ್ಯಾರ್ಥಿಗಳಿಗೆ | ರೂ. 850/- | ರೂ. 1000/- |
| 2 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | ರೂ. 750/- | ರೂ. 900/- |
| 3 | ಸರ್ಕಾರದ ಆಶ್ರಮ ಶಾಲೆಗಳು | ರೂ. 600/- | ರೂ. 700/- |

ಇದಕ್ಕೆ ತಗಲುವ ವೆಚ್ಚವನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿಯಲ್ಲಿ ಭರಿಸತಕ್ಕದ್ದು.

1. ಜಿಲ್ಲಾವಲಯ ಯೋಜನೆ/ಯೋಜನೇತರ ಲೆಕ್ಕಶೀರ್ಷಿಕೆ 2225-00-103-0-26 (ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ)
2. ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-53 ಮತ್ತು 2225-03-277-3-10(ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ)
3. ಜಿಲ್ಲಾವಲಯ ಯೋಜನೇತರ ಲೆಕ್ಕಶೀರ್ಷಿಕೆ 2225-00-103-0-41(ಆಶ್ರಮಶಾಲೆಯ ವಿದ್ಯಾರ್ಥಿಗಳಿಗೆ)
4. ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-62(ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ)
5. ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-79(ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು)

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/1/ಟಿಎಫ್‌ಪಿ/2013, ದಿನಾಂಕ: 10.05.2013ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
8. ರಾಜ್ಯ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
9. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
10. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ

} ಆಯುಕ್ತರು, ಹಿಂದುಳಿದ ವರ್ಗಗಳ ಕಲ ಇಲಾಖೆ ಇವರ ಮುಖಾ

11. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
12. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3), ವಿಧಾನಸೌಧ, ಬೆಂಗಳೂರು.
16. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

-----